# ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 321

ವಿಧಾನ ಪರಿಷತ್ ಸದಸ್ಯರು : ಶ್ರೀ ಐವಾನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 06.03.2020

ಉತ್ತರಿಸುವವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2018-19 ರಿಂದ ಮುಖ್ಯಮಂತ್ರಿಗಳ ಗ್ರಾಮವಿಕಾಸ ಯೋಜನೆಯನ್ನು ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣವೇನು; | ಬಂದಿರುವುದಿಲ್ಲ. |
| ಆ) | ರಾಜ್ಯದಲ್ಲಿ 2017-18ರಲ್ಲಿ ಗ್ರಾಮ ವಿಕಾಸ ಯೋಜನೆ ಅನ್ವಯ ಎಷ್ಟು ಗ್ರಾಮಗಳಿಗೆ ಅನುದಾನ ನೀಡಲಾಗಿದೆ; ಇದಕ್ಕೆ ಬಿಡುಗಡೆಗೊಳಿಸಿರುವ ಹಣವೆಷ್ಟು; ಎಲ್ಲಾ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು) | 2015-16ನೇ ಸಾಲಿನಲ್ಲಿ ಪ್ರಾರಂಭವಾದ ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆ ಮಾಡಲಾದ ಒಟ್ಟು 939 ಗ್ರಾಮಗಳಿಗೆ, ತಲಾ ರೂ.75 ಲಕ್ಷಗಳಂತೆ ಒಟ್ಟು ರೂ.755.02 ಕೋಟಿಗಳನ್ನು ಬಿಡುಗಡೆ ಮಾಡಲಾಗಿದ್ದು, ಮಾರ್ಗಸೂಚಿಯನ್ವಯ ಕಾಮಗಾರಿಗಳನ್ನು ನಿರ್ವಹಿಸಲಾಗಿದ್ದು, ಯೋಜನೆಯು ಮುಕ್ತಾಯಗೊಂಡಿರುತ್ತದೆ.<br><br>2017-18 ರಿಂದ ಈ ಯೋಜನೆಯನ್ನು ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆ ಎಂದು ಹೆಸರಿಸಿ ಪ್ರತಿ ಗ್ರಾಮಕ್ಕೆ ರೂ.1.00 ಕೋಟಿಯಂತೆ 1000 ಗ್ರಾಮಗಳಿಗೆ ಅನುಮೋದನೆ ನೀಡಲಾಗಿದೆ. |
| ಇ) | ಈ ಯೋಜನೆಗೆ ಕನಿಷ್ಟ ಎರಡು ಲಕ್ಷ ಅನುದಾನ ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ; | ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆಯಡಿಯಲ್ಲಿ ಆಯ್ಕೆಯಾದ ಪ್ರತಿ ಗ್ರಾಮಕ್ಕೆ ರೂ.1.00 ಕೋಟಿಗಳ ಅನುದಾನವನ್ನು ನಿಗಧಿಪಡಿಸಲಾಗಿದೆ. |
| ಈ) | 2017-18ರ ಯೋಜನೆಗೆ ಹಣ ಬಿಡುಗಡೆ ಮಾಡದೇ ಕಾಮಗಾರಿಗಳು ವಿಳಂಬಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ, ಆದರೆ 2017-18ನೇ ಸಾಲಿನಲ್ಲಿ ಹಂಚಿಕೆಯಾಗಿದ್ದ ರೂ.392.25 ಕೋಟಿಗಳನ್ನು ಪ್ರಗತಿಯನ್ನಾಧರಿಸಿ ಬಿಡುಗಡೆ ಮಾಡಲಾಗಿದೆ. |
| ಉ) | 2017-18ರಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು; ಬಾಕಿ ಇರುವ ಅನುದಾನ ಎಷ್ಟು? (ವಿವರ ನೀಡುವುದು) | 2017-18ನೇ ವರ್ಷವು ಸೇರಿದಂತೆ ಯೋಜನೆಗೆ ಬಿಡುಗಡೆ ಮಾಡಿದ ಹಾಗೂ ಬಿಡುಗಡೆಗೆ ಬಾಕಿ ಇದ್ದ ಅನುದಾನದ ವರ್ಷವಾರು ವಿವರವನ್ನು ಈ ಕೆಳಕಂಡಂತೆ ನೀಡಿದೆ.<br>**ರೂ.ಕೋಟಿಗಳಲ್ಲಿ** |

| ಯೋಜನೆ | ಬೇಡಿಕೆ | ಬಿಡುಗಡೆ | |
|---|---|---|---|
| | | 2017-18 | 2018-19 |
| ಗ್ರಾಮ ವಿಕಾಸ | 168.42 | 92.25 | 76.17 |

ರೂ.ಕೋಟಿಗಳಲ್ಲಿ

| ಯೋಜನೆ | ಬೇಡಿಕೆ | ಬಿಡುಗಡೆ | | | ಬಾಕಿ |
|---|---|---|---|---|---|
| | | 2017 –18 | 2018 –19 | 2019 –20 | |
| ಮುಖ್ಯಮಂತ್ರಿ ಗ್ರಾಮ ವಿಕಾಸ | 1000 | 300 | 135 | 200 | 365 |

ಸಂ: ಗ್ರಾಅಪ/ 1/25/ಆರ್ಆರ್ಸಿ/2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.